**ಓ.ಎಸ್. ಸಂಖ್ಯೆಃ 54/2020**

**ಪಿ.ಡಬ್ಲ್ಯೂಃ 1**

ದಿನಾಂಕಃ27.10.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿಯ ಪರ ಶ್ರೀ ಕೆ ಎಸ್ ಎಂಃ ವಕೀಲರಿಂದ**

ಇಂದು ನಾನು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣೀಕರಿಸುತ್ತೇನೆ.

2. ದಿಃ01.03.1999 ರಂದು ಬರೆಯಲಾದ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.1 ಎಂದು, ಮ್ಯುಟೇಶನ್ ನಂಃ53/1998-99 ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.2 ಎಂದು, ದಿಃ30.11.2017 ರಂದು ಬರೆಯಲಾದ ಅಡಮಾನ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.3 ಎಂದು, ಕೈಬರವಣಿಗೆಯಲ್ಲಿರುವ 2 ಪಹಣಿ ಪತ್ರಿಕೆಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.4 ಮತ್ತು 5 ಎಂದು, 19 ಗಣಕೀಕೃತ ಪಹಣಿ ಪತ್ರಿಕೆಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.6 ರಿಂದ 24 ಎಂದು, ಕಂದಾಯ ಪಾವತಿಸಿದ 1 ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ. 25 ಎಂದು, ಎಪಿ ಎಂಸಿ ಸಿರುಗುಪ್ಪ ಇವರು ನೀಡಿದ 2 ಖರೀದಿ ಪಟ್ಟಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ 26 ಮತ್ತು 27 ಎಂದು, 8 ಬಾವಚಿತ್ರಗಳು ಮತ್ತು ಆ ಕುರಿತು 2 ಸಿಡಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.28 ರಿಂದ 37 ಎಂದು ಗುರುತಿಸಲಾಯಿತು.

**ಪಾಟಿ ಸವಾಲಿಗೆ ವಕೀಲರು ಸಮಯಾವಕಾಶ ಕೋರಿದ್ದರಿಂದ ವಿನಂತಿಯ ಮೇರೆಗೆ ಸಮಯಾವಕಾಶ ನೀಡಲಾಯಿತು.**

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಮ್.ಎಫ್.ಸಿ.**
**ನ್ಯಾಯಾಧೀಶರು, ಸಿರುಗುಪ್ಪ .**